# ತುಮಕೂರು ವಿಶ್ವವಿದ್ಯಾನಿಲಯ

ಸಂಖ್ಯೆ:ತು.ವಿ:ಅ.ವಿ:ಅ.ಉ.ನೇ:2026-27/ 1482 ದಿನಾಂಕ:23.07.2026

## : ಪರಿಷ್ಕೃತ ಅಧಿಸೂಚನೆ :

ವಿಷಯ : ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿನ ವಿವಿಧ ಸ್ನಾತಕ ವಿಭಾಗಗಳ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ : 1. ಈ ಕಚೇರಿ ಅಧಿಸೂಚನೆ ಸಂಖ್ಯೆ:ತು.ವಿ:ಅ.ವಿ:ಅ.ಉ.ನೇ:2026-27/1249 ದಿನಾಂಕ:07.07.2026

2. ಈ ಕಚೇರಿ ಅಧಿಸೂಚನೆ ಸಂಖ್ಯೆ:ತು.ವಿ:ಅ.ವಿ:ಅ.ಉ.ನೇ:2026-27/1250 ದಿನಾಂಕ:07.07.2026

*******

ತುಮಕೂರು ವಿಶ್ವವಿದ್ಯಾನಿಲಯದಲ್ಲಿ 2026-27 ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾನಿಲಯ ವಿಜ್ಞಾನ ಮತ್ತು ಕಲಾ ಕಾಲೇಜಿನ ಸ್ನಾತಕ ಪದವಿ ತರಗತಿಗಳಿಗೆ ವಿಷಯವಾರು ಬೋಧನೆ ಮಾಡಲು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡುವ ಸಂಬಂಧ ಯು.ಜಿ.ಸಿ. ನಿಯಮಾನುಸಾರ ಸಂಬಂಧಿಸಿದ ವಿಷಯದಲ್ಲಿ ಸ್ನಾತಕೋತ್ತರ ಪದವಿಯಲ್ಲಿ ಶೇ. 55 ಅಂಕಗಳು (ಸಾಮಾನ್ಯ ಮತ್ತು ಇತರೆ ವರ್ಗದ ಅಭ್ಯರ್ಥಿಗಳು) ಹಾಗೂ ಶೇ. 50 ಅಂಕಗಳೊಂದಿಗೆ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು) NET/SLET/SET/Ph.D ವಿದ್ಯಾರ್ಹತೆ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಉಲ್ಲೇಖ (1) & (2) ಗಳನ್ವಯ ಆನ್‌ಲೈನ್ ಮುಖೇನ ಅರ್ಜಿಗಳನ್ನು ಆಹ್ವಾನಿಸಿ ದಿನಾಂಕ:18.07.2026 ರ ಸಂಜೆ 05.30 ಗಂಟೆಯೊಳಗಾಗಿ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಸದರಿ ಅರ್ಜಿಗಳನ್ನು ಸಲ್ಲಿಸುವ ಅವಧಿಯನ್ನು ದಿನಾಂಕ:**26.07.2026 ರ ಭಾನುವಾರ ಸಂಜೆ 05.30** ರವರೆಗೆ ವಿಸ್ತರಿಸಿದ್ದು, ಈ ಅವಕಾಶವನ್ನು ಅರ್ಹ ಅಭ್ಯರ್ಥಿಗಳು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಲಾಗಿದೆ.

**ಸ್ನಾತಕ ಪದವಿಯ ವಿಷಯಗಳು : ಕನ್ನಡ, ಇಂಗ್ಲೀಷ್, ಹಿಂದಿ, ಉರ್ದು, ಸಂಸ್ಕೃತ, ಇತಿಹಾಸ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಪತ್ರಿಕೋದ್ಯಮ, ರಾಜ್ಯಶಾಸ್ತ್ರ, ವಾಣಿಜ್ಯ & ನಿರ್ವಹಣಾಶಾಸ್ತ್ರ, ಸಮಾಜಕಾರ್ಯ, ಮನೋವಿಜ್ಞಾನ, ಗ್ರಂಥಾಲಯ & ಮಾಹಿತಿ ವಿಜ್ಞಾನ, ದೈಹಿಕ ಶಿಕ್ಷಣ, ವಿದ್ಯುನ್ಮಾನ, ಬಿ.ಎಸ್ಸಿ.(ಗಣಕ ವಿಜ್ಞಾನ)/ಬಿ.ಸಿ.ಎ./ಬಿ.ಸಿ.ಎ.(ಡಾಟಾ ಸೈನ್ಸ್), ಸೂಕ್ಷ್ಮಜೀವಶಾಸ್ತ್ರ, ಜೈವಿಕ ತಂತ್ರಜ್ಞಾನ, ಜೀವರಸಾಯನಶಾಸ್ತ್ರ, ಗಣಿತಶಾಸ್ತ್ರ, ಪ್ರಾಣಿಶಾಸ್ತ್ರ, ಭೌತಶಾಸ್ತ್ರ, ಸಸ್ಯಶಾಸ್ತ್ರ ಮತ್ತು ರಸಾಯನಶಾಸ್ತ್ರ.**

ಇನ್ನುಳಿದಂತೆ ಉಲ್ಲೇಖ (1) & (2) ರ ಅಧಿಸೂಚನೆಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಆದೇಶದ ಮೇರೆಗೆ

23.07.2026

ಉಪಕುಲಸಚಿವರು

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು